**<u>ದಿನಾಂಕಃ 21-01-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಆರ್ ಬಿ ಡಿ ವಕೀಲರಿಂದಃ</u>**

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಸದರಿ ಸಾಕ್ಷಿಯನ್ನು ಪಿ.ಡಬ್ಲೂ-1 ಎಂದು ಪರಿಗಣಿಸಲಾಯಿತು.**

ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಾವಾ ಸರ್ವೆ ನಂ.327 ನೇದಕ್ಕೆ ಸಂಬಂಧಿಸಿದ ಗಣಕೀಕೃತ ಪಹಣಿಯನ್ನು ನಿಪಿ-1 ಎಂದು, ಎಂ.ಆರ್ ನಂ.76/2005-06 ನೇದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಎಂ.ಇ ನಂ.20 ನೇದ್ದರ ದೃಡೀಕೃತ ಪ್ರತಿಯನ್ನು ನಿಪಿ-3 ಎಂದು, ದಾವಾ ಆಸ್ತಿಗೆ ಸಂಬಂಧಿಸಿದ 08 ಕೈಬರಹ ಪಹಣಿಗಳ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಅನುಕ್ರಮವಾಗಿ ನಿಪಿ-4 ರಿಂದ 11 ಎಂದು, 1954-55 ನೇ ಸಾಲಿನ ಖಾಸರ ಪಹಣಿಗಳನ್ನು ಹಾಜರುಪಡಿಸಿದ್ದು ನಿಪಿ-12 ಎಂದು, 1955-56 ರಿಂದ 1962-63 ರವಗಿನ ಶೇಶಲಾ ಪಹಣಿಗಳನ್ನು ಒಟ್ಟಾರೆಯಾಗಿ ನಿಪಿ-13 ಎಂದು, ದಾವಾ ಆಸ್ತಿಗೆ ಸಂಬಂಧಿಸಿದ 04 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಅನುಕ್ರಮವಾಗಿ ನಿಪಿ-14 ರಿಂದ 17 ಎಂದು ಗುರುತಿಸಲಾಯಿತು. ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಬೇಕಾಗಿ ವಿನಂತಿ.

**ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ಶ್ರೀ ಡಿ ಹೆಚ್ ಜೆ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಲಾಯಿತು.**

**<u>(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)</u>**

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.